15ನೇ ವಿ.ಪ SL.NO:-49 ದಿ:-13-03-2026

**ಶ್ರೀ ಕಿಶೋರ್ ಕುಮಾರ್ ಪುತ್ತೂರ್, ಶಾಸಕರು, ಕರ್ನಾಟಕ ವಿಧಾನ ಪರಿಷತ್, ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಕೋರಿದ ವಿಷಯದ ಕುರಿತು ಸರ್ಕಾರದ ಹೇಳಿಕೆ.**

**ವಿಷಯ:**

ಸಾರ್ವಜನಿಕ ಸ್ಥಳಗಳಲ್ಲಿ ತ್ಯಾಜ್ಯ ಎಸೆಯುವವರ ವಿರುದ್ಧ ರೂಪಾಯಿ 1 ಲಕ್ಷದವರೆಗೆ ದಂಡ ವಿಧಿಸುವ ಕಾನೂನು ಇದ್ದರೂ ಸಹ ಅದನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದಿರುವ ಪರಿಣಾಮ ಸಂಪೂರ್ಣ ಸ್ವಚ್ಛತೆ ಸಾಧಿಸಲು ಸಾಧ್ಯವಾಗುತ್ತಿಲ್ಲವೆಂದು, ಮಾದರಿ ಗ್ರಾಮ ಅಭಿಯಾನ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ಉಳ್ಳಾಲ ತಾಲೂಕು ಘಟಕ ಮತ್ತು ರಾಷ್ಟ್ರೀಯ ನಿರ್ಮಲ ಗ್ರಾಮ ಪ್ರಶಸ್ತಿ ಪುರಸ್ಕೃತ ಜನ ಶಿಕ್ಷಣ ಟ್ರಸ್ಟ್ ಜಂಟಿ ಆಶ್ರಯದಲ್ಲಿ ನಡೆದ ಸಮುದಾಯ ಆರೋಗ್ಯ ಅರಿವು ಅಭಿಯಾನ 'ಕಸ ಮುಕ್ತ ಗ್ರಾಮ – ಕ್ಯಾನ್ಸರ್ ಮುಕ್ತ ಗ್ರಾಮ – ಸ್ವಚ್ಛ ಮನೆ ಸ್ವಯಂ ಘೋಷಣೆ, ಸಂವಾದ ಸಂಕಲ್ಪ' ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿದ್ದ ದಕ್ಷಿಣ ಕನ್ನಡ ಜಿಲ್ಲೆಯ ಸ್ವಚ್ಛತಾ ರಾಯಭಾರಿ ಶ್ರೀ ಶೀನ ಶೆಟ್ಟಿಯವರು ಕಳವಳ ವ್ಯಕ್ತಪಡಿಸಿದರು.

ಜಗತ್ತಿನ ಕೆಲವು ರಾಷ್ಟ್ರಗಳಲ್ಲಿ ಪ್ಲಾಸ್ಟಿಕ್ ಮಳೆ ಶುರುವಾಗಿದ್ದರೆ ನಮ್ಮ ಜಿಲ್ಲೆಯಲ್ಲಿ ಪ್ಲಾಸ್ಟಿಕ್ ಬೆಂಕಿಯೇ ಹೊತ್ತಿಕೊಂಡಿದೆ. ಮನೆ, ಅಂಗಡಿ, ಹೋಟೇಲ್, ಶಾಲೆ, ಧಾರ್ಮಿಕ ಕ್ಷೇತ್ರ, ವಿಶ್ವವಿದ್ಯಾಲಯಗಳ ವಠಾರಗಳಲ್ಲಿ ಪ್ಲಾಸ್ಟಿಕ್ ಅನ್ನು ಎಸೆಯುವುದಲ್ಲದೆ ಅದನ್ನು ಸುಡುವ ಪ್ರಕ್ರಿಯೆಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಈ ಬಗ್ಗೆ ಕ್ರಮವಹಿಸಲು ಸರ್ಕಾರಕ್ಕೆ ಪತ್ರ ಬರೆದರೆ ಪ್ರೀತಿಯ ಪ್ರಶ್ನೋತ್ತರ ಪ್ರಕ್ರಿಯೆ ನಡೆಯುತ್ತದೆಯೇ ಹೊರತು ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಿಗುತ್ತಿಲ್ಲ.

ಆದ್ದರಿಂದ ಈ ಎಲ್ಲಾ ವಿಷಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸ್ವಚ್ಛತೆಯ ಬಗ್ಗೆ ಪ್ರಸ್ತುತವಿರುವ ನಿಯಮಗಳನ್ನು ಇನ್ನಷ್ಟು ಬಲವಡಿಸಿ ರಾಜ್ಯದ ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ಸದರಿ ನಿಯಮವು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಸ್ವಚ್ಛ ಪರಿಸರ ನಿರ್ಮಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಕೋರುತ್ತೇನೆ.

**ಹೇಳಿಕೆ:**

ದಕ್ಷಿಣ ಕನ್ನಡ ಜಿಲ್ಲೆಯ 223 ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ಮನೆ ಹಾಗೂ ವಾಣಿಜ್ಯ ಸಂಕೀರ್ಣಗಳಿಂದ ಪ್ಲಾಸ್ಟಿಕ್ ಸೇರಿದಂತೆ ಒಣ ಕಸವನ್ನು ವ್ಯವಸ್ಥಿತವಾಗಿ ಸಂಗ್ರಹಿಸಲಾಗುತ್ತಿದೆ. ಪ್ರಸ್ತುತ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 4 **Material**

**Recovery Facility** ಘಟಕಗಳ ಮೂಲಕ ವೈಜ್ಞಾನಿಕವಾಗಿ ವಿಂಗಡಿಸಿ, ಮರುಬಳಕೆ ಘಟಕಗಳಿಗೆ ಹಾಗೂ ಸಿಮೆಂಟ್ ಉತ್ಪಾದನಾ ಕೇಂದ್ರಗಳಿಗೆ ಇಂಧನವಾಗಿ

ರವಾನಿಸಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ಈ ಘಟಕಗಳ ಮೂಲಕ ಒಟ್ಟು **5,375 ಟನ್** ಒಣ ತ್ಯಾಜ್ಯವನ್ನು ಯಶಸ್ವಿಯಾಗಿ ನಿರ್ವಹಿಸಲಾಗಿದೆ. ಹೆಚ್ಚುತ್ತಿರುವ ತ್ಯಾಜ್ಯದ ಪ್ರಮಾಣವನ್ನು ಗಮನದಲ್ಲಿಟ್ಟುಕೊಂಡು, **'K-Shore'** ಯೋಜನೆಯಡಿ ತಲಾ 10 ಟನ್ ಸಾಮರ್ಥ್ಯದ ಇನ್ನೂ ಎರಡು ಹೊಸ MRF ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಪಂಚಾಯತ್ ಮಟ್ಟದಲ್ಲಿ ಸ್ವಚ್ಛತೆಯನ್ನು ಕಾಪಾಡಲು **"ವಿಶೇಷ ನೈರ್ಮಲ್ಯ ಕಾರ್ಯಪಡೆ"** ಗಳನ್ನು ರಚಿಸಲಾಗಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ಅವೈಜ್ಞಾನಿಕವಾಗಿ ಕಸ ಸುರಿಯುವುದು, ತ್ಯಾಜ್ಯ ಸುಡುವುದು ಅಥವಾ ಹೂಳುವುದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ನಿಯಮ ಉಲ್ಲಂಘಿಸಿದವರ ವಿರುದ್ಧ **263 ಪ್ರಕರಣ**ಗಳನ್ನು ದಾಖಲಿಸಿ, ಒಟ್ಟು **ರೂ. 5,83,850/-** ದಂಡ ವಸೂಲಿ ಮಾಡಲಾಗಿದೆ.

ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ವೈಜ್ಞಾನಿಕ ವಿಲೇವಾರಿ ಸಂಬಂಧ **Solid Waste Management Rules, 2016** ಹಾಗೂ **Plastic Waste Management Rules, 2016** ಗಳನ್ವಯ **"ಕರ್ನಾಟಕ ರಾಜ್ಯ ಗ್ರಾಮೀಣ ಸ್ವಚ್ಛತೆ ಮತ್ತು ತ್ಯಾಜ್ಯ ನಿರ್ವಹಣಾ ನೀತಿ ಮತ್ತು ಕಾರ್ಯತಂತ್ರ"** ಅನ್ನು ರೂಪಿಸಿದ್ದು, ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಪ್ರತಿ ತಾಲ್ಲೂಕಿನಲ್ಲಿ ಪ್ಲಾಸ್ಟಿಕ್ ವೇಸ್ಟ್ ಮ್ಯಾನೇಜ್ಮೆಂಟ್ ಘಟಕಗಳನ್ನು ಸ್ಥಾಪಿಸಲಾಗುತ್ತಿದ್ದು, ಸಮುದಾಯದ ಪಾಲ್ಗೊಳ್ಳುವಿಕೆಯನ್ನು ಖಾತರಿಪಡಿಸಲು ಗ್ರಾಮ ಪಂಚಾಯತ್ ಮಟ್ಟದ ಫೆಡರೇಷನ್ (GPLF) ಸದಸ್ಯರನ್ನು ತ್ಯಾಜ್ಯ ನಿರ್ವಹಣೆ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲಾಗಿದೆ. ಪ್ರವಾಸಿ ತಾಣಗಳು ಮತ್ತು ಹೆದ್ದಾರಿಗಳಲ್ಲಿ ಕಸ ಸುರಿಯುವ 'ಬ್ಲಾಕ್ ಸ್ಪಾಟ್'ಗಳನ್ನು ಪತ್ತೆಹಚ್ಚಲು **CCTV ಕ್ಯಾಮೆರಾ**ಗಳನ್ನು ಹಂತ ಹಂತವಾಗಿ ಅಳವಡಿಸಲು ಕ್ರಮವಹಿಸಲಾಗಿದೆ.

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು